ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೩೫

**ಪಟ್ಟಿ – ೨೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**
**ಮಂಗಳವಾರ, ದಿನಾಂಕ : ೩೦ನೇ ಮಾರ್ಚ್, ೨೦೨೧**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

೭. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

---

## ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಗಮದಿಂದ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ವಿವರ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೩ (೨೪೫೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸಹಕಾರಿ ಬ್ಯಾಂಕ್ ನಿಯಮಿತ, ಕೇಂದ್ರ ಕಛೇರಿ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಎಷ್ಟು ; (ಹೆಸರು ಮತ್ತು ಹುದ್ದೆವಾರು ವಿವರ ನೀಡುವುದು)

(ಆ) ಸದರಿ ಬ್ಯಾಂಕ್‌ನಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗಕ್ಕೆ ಸಂವಿಧಾನದ ಅನುಚ್ಛೇದ ೩೭೧(ಜೆ) ರನ್ವಯ ನೇಮಕಾತಿಯಲ್ಲಿ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆಯೇ ; ೩೭೧(ಜೆ) ರನ್ವಯ ಪದೋನ್ನತಿ ಪಡೆದವರ ವಿವರಗಳನ್ನು ಹೆಸರು ಮತ್ತು ಹುದ್ದೆವಾರು ನೀಡುವುದು)

(ಇ) ಇಲ್ಲದಿದ್ದಲ್ಲಿ, ನಿಗಧಿಪಡಿಸದಿರಲು ಕಾರಣಗಳೇನು ಮತ್ತು ಇದರಿಂದ ಅನುಚ್ಛೇದ ೩೭೧(ಜೆ) ಉಲ್ಲಂಘಿಸಿದಂತಾಗುವುದಿಲ್ಲವೇ ಹಾಗೂ ನೌಕರರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ? (ವಿವರ ನೀಡುವುದು)

## ಬೀದರ್ ಜಿಲ್ಲೆಯಾದ್ಯಂತ ತ್ಯಾಜ್ಯ ಸಂಸ್ಕರಣೆಯಾಗದಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೪ (೨೪೫೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಸಂಸ್ಕರಣಾ ಘಟಕದಲ್ಲಿ ನಗರಸಭೆ ಸೇರಿದಂತೆ ಜಿಲ್ಲೆಯ ಯಾವುದೇ ಸ್ಥಳೀಯ ಸಂಸ್ಥೆಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ನಿಜವೇ;

(ಆ) ಜಿಲ್ಲೆಯ ನಗರಸಭೆ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಸಂಗ್ರಹವಾಗುತ್ತಿರುವ ಎಷ್ಟು ಘನತ್ಯಾಜ್ಯ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್ ಬಳಕೆ ಮಾಡುವ ಮತ್ತು ವಿಲೇವಾರಿ ಮಾಡುವ ಯೋಜನೆ ಇದೆಯೇ; (ವಿವರ ನೀಡುವುದು)

(ಇ) ಈ ರೀತಿ ಸಂಗ್ರಹವಾದ ತ್ಯಾಜ್ಯವನ್ನು ಭೂಮಿಗೆ ಹಾಕಬಾರದೆಂದು ೨೦೦೫ರಲ್ಲಿ ನಿಯಮ ರೂಪಿಸಿದ್ದರೂ ಇದನ್ನು ಲೆಕ್ಕಿಸದೆ ಕಸವನ್ನು ಗುಂಡಿಗೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮ ಏನು;

(ಈ) ಜಿಲ್ಲೆಯ ನಗರಸಭೆ ಮತ್ತು ಪುರಸಭೆಗಳು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹಣೆಯಾಗುತ್ತಿದ್ದು, ಇದರ ವಿಲೇವಾರಿ ಮತ್ತು ಪುನರ್ ಬಳಕೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಮಿಲ್ಲೆಟ್, ಜೋಳ, ರಾಗಿ ಮತ್ತು ಇತರೆ ಪೌಷ್ಠಕ ಆಹಾರ ಪೂರೈಸುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೫ (೨೪೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನ ಮಂತ್ರಿಗಳ ಕನಸಿನ ಯೋಜನೆಯಾದ ಮಿಲ್ಲೆಟ್ ಕ್ರಾಂತಿ ಯೋಜನೆಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪೌಷ್ಠಿಕ ಆಹಾರಗಳಾದ ಮಿಲ್ಲೆಟ್, ಜೋಳ, ರಾಗಿ ಮುಂತಾದವುಗಳನ್ನು ನ್ಯಾಯಬೆಲೆ ಅಂಗಡಿಗಳ ಮುಖೇನ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾರ್ವಜನಿಕ ಪಡಿತರ ಮೂಲಕ ವಿತರಿಸಲು ಅಗತ್ಯವಿರುವಷ್ಟು ಮಿಲ್ಲೆಟ್, ರಾಗಿ, ಜೋಳ ಲಭ್ಯವಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ., ವತಿಯಿಂದ ಕೈಗಾರಿಕೆಗಳಿಗಾಗಿ ಭೂಮಿ ಸ್ವಾಧೀನ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೬೬ (೨೪೫೯) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ., ವತಿಯಿಂದ ಇದುವರೆವಿಗೂ ಕೈಗಾರಿಕೆಗಳ ಉಪಯೋಗಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ಭೂಮಿಯ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ., ಯವರು ರೈತರ ಜಮೀನನ್ನು ಸ್ವಾದೀನ ಪಡಿಸಿಕೊಳ್ಳುವಾಗ ಅನುಸರಿಸಿರುವ ಮಾನದಂಡಗಳೇನು ; (ವಿವರವನ್ನು ನೀಡುವುದು)

(ಇ) ಕೆ.ಐ.ಎ.ಡಿ.ಬಿ., ಯವರು ರೈತರ ಜಮೀನನ್ನು ಸ್ವಾದೀನ ಪಡಿಸಿಕೊಳ್ಳುವಾಗ ಸಂಬಂಧಪಟ್ಟ ರೈತರಿಗೆ ಪ್ರತಿ ಎಕರೆಗೆ ಎಷ್ಟು ಪ್ರಮಾಣದ ಪರಿಹಾರ ಧನವನ್ನು ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕೆ.ಐ.ಎ.ಡಿ.ಬಿ., ಅಧೀನದಲ್ಲಿ ಎಷ್ಟು ವಿಸ್ತೀರ್ಣದ ಜಮೀನು ಲಭ್ಯವಿರುತ್ತವೆ; ಹಾಗೂ ಉದ್ದಿಮೆದಾರರಿಗೆ ಒದಗಿಸುವ ಮಾನದಂಡಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಬಗ್ಗೆ

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೨೦೬೭ (೨೪೧೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೦-೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ ಸಕ್ಕರೆ ಕಾರ್ಖಾನೆ ಪ್ರಾರಂಭವಾಗದಿರಲು ಕಾರಣಗಳೇನು;

(ಆ) ಕಾರ್ಖಾನೆ ಪ್ರಾರಂಭಕ್ಕಾಗಿ ಹಲವಾರು ಬಾರಿ ಸರ್ಕಾರದ ಗಮನಕ್ಕೆ ತಂದರೂ ಯಾವುದೇ ರೀತಿಯ ಪ್ರತಿಕ್ರಿಯೆ ನೀಡದಿರಲು ಕಾರಣವೇನು;

(ಇ) ಸದರಿ ಕಾರ್ಖಾನೆಯನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ?

## ಸಣ್ಣ ಉದ್ಯಮಿಗಳಿಗೆ ಪ್ರೋತ್ಸಾಹ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೬೮ (೨೪೫೧) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಣ್ಣ ಉದ್ಯಮಗಳನ್ನು ನಡೆಸಲು ಸರ್ಕಾರದಿಂದ ಯಾವ ರೀತಿ ಪ್ರೋತ್ಸಾಹ ನೀಡಲಾಗುತ್ತಿದೆ; ಈ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆಯೇ ;

(ಆ) ಸಣ್ಣ ಉದ್ಯಮಗಳಿಗೆ ಅನುಮತಿ ಪತ್ರಗಳನ್ನು ಪಡೆಯಲು ಇಲಾಖೆಯಿಂದ ಸಾಕಷ್ಟು ತೊಂದರೆಗಳಾಗುತ್ತಿದ್ದು ಪ್ರೋತ್ಸಾಹ ಸಿಗುತ್ತಿಲ್ಲವೆಂಬ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಕೊರೋನಾದಿಂದ ಅನೇಕ ಸಣ್ಣ ಉದ್ಯಮಗಳಿಗೆ ತೊಂದರೆಯಾಗಿದ್ದು, ಈ ಸಂಧರ್ಬದಲ್ಲಿ ಸಣ್ಣ ಉದ್ದಿಮೆದಾರರಿಗೆ ಪ್ರೋತ್ಸಾಹ ನೀಡಲು ಇಲಾಖೆಯಲ್ಲಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ?

## ಅಕ್ರಮ ಗಣಿಗಾರಿಕೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೬೯ (೨೪೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆಗಳನ್ನು ಎಷ್ಟು ಕಡೆ ಪತ್ತೆ ಹಚ್ಚಲಾಗಿದೆ; ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೂ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಅಕ್ರಮ ಗಣಿಗಾರಿಕೆಗೆ ಸಂಗ್ರಹಿಸಿದ್ದ ಸ್ಫೋಟಕಗಳು ಸ್ಫೋಟಿಸಿ ಎಷ್ಟು ಕಡೆ ಅನಾಹುತಗಳು ಸಂಭವಿಸಿವೆ ; ಅನಾಹುತಕ್ಕೊಳಗಾದವರಿಗೆ ಯಾವ ರೀತಿಯ ಪರಿಹಾರಗಳನ್ನು ನೀಡಲಾಗಿದೆ ?

# ಸರ್ಕಾರದಿಂದ ಸಗಟು ಮಾರಾಟ ಏಜೆನ್ಸಿಗಳಿಗೆ ಬಾಕಿ ಇರುವ ಮೊತ್ತ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೭೦ (೨೪೪೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪುಡ್ ಕಾರ್ಪೋರೇಷನ್ ಆಫ್ ಇಂಡಿಯಾ (ಎಫ್.ಸಿ.ಐ) ಕರ್ನಾಟಕ ಪುಡ್ ಕಾರ್ಪೋರೇಷನ್ (ಕೆ.ಎಫ್.ಸಿ)ಗೆ ಸಂಬಂಧಿಸಿದ ಗೋದಾಮುಗಳ ಸಂಖ್ಯೆ ಎಷ್ಟು; ಅವು ಯಾವುವು; ಅವುಗಳ ಸಂಗ್ರಹಣಾ ಸಾಮರ್ಥ್ಯವೆಷ್ಟು; ಗೋದಾಮುಗಳಿಲ್ಲದ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಾವುವು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪಡಿತರ ಕೇಂದ್ರಗಳಿಗೆ ಪಡಿತರ ಸರಬರಾಜು ಮಾಡುವ ಸಗಟು ಮಾರಾಟ ಏಜೆನ್ಸಿಗಳ ಸಂಖ್ಯೆ ಎಷ್ಟು ಅವು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು) ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಉಡುಪಿ ಜಿಲ್ಲೆಯಲ್ಲಿ ಎಫ್.ಸಿ.ಐ, ಕೆ.ಎಫ್.ಸಿ ಗಳಿಂದ ಸಗಟು ಮಾರಾಟ ಏಜೆನ್ಸಿಗಳು ಯಾವ ಯಾವ ಪಡಿತರ ಸಾಮಗ್ರಿಗಳನ್ನು ಖರೀದಿ ಮಾಡುತ್ತಿವೆ; ಸರ್ಕಾರದಿಂದ ಈ ಏಜೆನ್ಸಿಗಳಿಗೆ ನೀಡಲು ಬಾಕಿಯಿರುವ ಮೊತ್ತವೆಷ್ಟು; (ವರ್ಷವಾರು, ಸಂಸ್ಥೆವಾರು ಮಾಹಿತಿ ನೀಡುವುದು)

(ಈ) ಸರ್ಕಾರವು ಭಾರೀ ಮೊತ್ತದ ಬಾಕಿ ಇರಿಸಿಕೊಂಡಿರುವ ಕಾರಣ ಸಗಟು ಏಜೆನ್ಸಿಗಳು ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಒಳಚರಂಡಿ ಯೋಜನೆಯ ತ್ಯಾಜ್ಯ ಶುದ್ಧೀಕರಣ ಘಟಕದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೧ (೨೪೪೪) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕುಂದಾಪುರ ಪುರಸಭಾ ವ್ಯಾಪ್ತಿಯ ೮ನೇ ವಾರ್ಡಿನಲ್ಲಿ ಪುರಸಭೆಯ ಒಳಚರಂಡಿ ಯೋಜನೆಯ ತ್ಯಾಜ್ಯ ಶುದ್ಧೀಕರಣ ಘಟಕ (ವೆಟ್ವೆಲ್) ನಿರ್ಮಾಣಕ್ಕೆ ಗುರುತಿಸಿದ ಸ್ಥಳವು ಜನವಸತಿ ಪ್ರದೇಶಕ್ಕೆ ಹತ್ತಿರದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರ ನಿರ್ಮಾಣಕ್ಕೆ ಸಾರ್ವಜನಿಕರ ಆಕ್ಷೇಪವಿರುವುದು ನಿಜವೇ; ಪ್ರಸ್ತಾವಿತ ಸ್ಥಳವು ಸಿ.ಆರ್ ಜೆಡ್ ವ್ಯಾಪ್ತಿಗೆ ಬರುವುದೇ; ಬಂದಲ್ಲಿ, ಸಿ.ಆರ್ ಜೆಡ್ ನಿಂದ ಅನುಮತಿ ಪಡೆಯಲಾಗಿದೆಯೇ; (ಸಿ.ಆರ್.ಜೆಡ್ ಅನುಮತಿ ಪತ್ರದ ಪ್ರತಿ ನೀಡುವುದು)

(ಇ) ಸದರಿ ಸ್ಥಳವನ್ನು ಖಾಸಗಿಯವರಿಂದ ಖರೀದಿಸುತ್ತಿರುವುದು ನಿಜವೇ; ಹೌದಾದಲ್ಲಿ, ಯಾವ ದರದಲ್ಲಿ ಯಾರಿಂದ ಖರೀದಿಸಲಾಗುವುದು; ಶಾಸನಬದ್ಧವಾಗಿ ಅಳತೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಜಾಗದ ನಕ್ಷೆಯ ಪ್ರತಿ ಒದಗಿಸುವುದು;

(ಈ) ಪ್ರಸ್ತಾವಿತ ಸ್ಥಳಕ್ಕೆ ದಾರಿಯಿದೆಯೇ; ಇದ್ದಲ್ಲಿ, ದಾರಿಯ ನಕ್ಷೆ ಒದಗಿಸುವುದು; ಇಲ್ಲವಾದ್ದಲ್ಲಿ, ದಾರಿ ಇಲ್ಲದೇ ಇದ್ದರೂ ಘಟಕವನ್ನು ನಿರ್ಮಿಸುವ ಉದ್ದೇಶವೇನು ?

## ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಯೋಜನೆಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೨ (೨೪೪೭) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; ಅವುಗಳ ಅಭಿವೃದ್ಧಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಸಿಗುವ ಸವಲತ್ತುಗಳಾವುವು; (ಯೋಜನೆ/ಕಾರ್ಯಕ್ರಮವಾರು ಮಾರ್ಗಸೂಚಿಯೊಂದಿಗೆ ಮಾಹಿತಿ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಸಣ್ಣ ಕೈಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಲ್ಲಿ ನೀಡಿದ ಗುರಿ ಏನು; ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಸಾಧಿಸಿದ ಗುರಿಯೆಷ್ಟು; ಬಾಕಿಯೆಷ್ಟು; ಬಾಕಿಯಿರಲು ಕಾರಣವೇನು;

(ಇ) ಸವಲತ್ತುಗಳನ್ನು ಪಡೆದವರೇ ಪದೇ ಪದೇ ಸವಲತ್ತುಗಳನ್ನು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳಾವುವು ?

## ನಗರಸಭೆಯಾಗಿ ಮೇಲ್ದರ್ಜೆಗೇರಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೩ (೨೪೪೫) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸಲು ಅನುಸರಿಸುವ ಮಾನದಂಡಗಳಾವುವು;(ಮಾರ್ಗಸೂಚಿ/ಸುತ್ತೋಲೆ ಒದಗಿಸುವುದು) ರಾಜ್ಯದಲ್ಲಿ ಯಾವ ಯಾವ ಪುರಸಭೆಗಳನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

(ಆ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಯನ್ನು ನಗರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಯಾವ ಯಾವ ಗ್ರಾಮ ಪಂಚಾಯತಿಗಳನ್ನು ಸೇರಿಸಿ ಮೇಲ್ದರ್ಜೆಗೇರಿಸಲಾಗುವುದು ಯಾವ ಯಾವ ಗ್ರಾಮ ಪಂಚಾಯಿತಿಗಳು ಬೇಡಿಕೆ ಸಲ್ಲಿಸಿರುತ್ತವೆ; ಬೇಡಿಕೆ ಸಲ್ಲಿಸದೇ ಇರುವ ಗ್ರಾಮ ಪಂಚಾಯಿತಿಗಳು ಯಾವುವು; ಪ್ರಸ್ತಾವನೆ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ?

## ರಾಜ್ಯದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೪ (೨೪೨೧) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು;

(ಈ) ಕೆಲವು ನಗರಸಭೆ, ಪುರಸಭೆಗಳಲ್ಲಿ ಮಂಜೂರಾದ ಹುದ್ದೆಗಳಿಗಿಂತ ಹೆಚ್ಚುವರಿ ನೌಕರರು, ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಶಿವಮೊಗ್ಗ ನಗರದಲ್ಲಿ ೨೪X೭ ಕುಡಿಯುವ ನೀರಿನ ಕಾಮಗಾರಿಯ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೫ (೨೪೧೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ನಗರದಲ್ಲಿ ೨೪X೭ ಕುಡಿಯುವ ನೀರಿನ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗಿದೆ; ಸದರಿ ಕಾಮಗಾರಿ ಯಾವ ಹಂತದಲ್ಲಿದೆ;

(ಆ) ಕುಡಿಯುವ ನೀರಿನ ಕಾಮಗಾರಿ ಪೂರ್ಣಗೊಳ್ಳಲು ಕೈಗೊಂಡಿರುವ ಕ್ರಮಗಳೇನು; ಮತ್ತು ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣವೇನು;

(ಇ) ಅಮೃತ್ ಯೋಜನೆಯಲ್ಲಿ ಎಷ್ಟು ಕಾಮಗಾರಿಗಳು ಮಂಜೂರಾಗಿವೇ;

(ಈ) ಅಮೃತ್ ಯೋಜನೆ ಯಾವ ಹಂತದಲ್ಲಿದೇ; (ವಿವರ ನೀಡುವುದು)

(ಉ) ಅಮೃತ್ ಯೋಜನೆಯ ಕಾಮಗಾರಿಯಲ್ಲಿ ಕಳಪೆಯಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿ ಸೌಹಾರ್ಧ ಸಹಕಾರಿ ಸಂಘಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭೬ (೨೪೨೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೌಹಾರ್ಧ ಸಹಕಾರಿ ಸಂಘಗಳನ್ನು ಕಾಯ್ದೆಯ ಯಾವ ಅಧಿನಿಯಮದಡಿ ನೊಂದಾವಣಿ ಮಾಡಲಾಗಿದೆ;

(ಆ) ಇಲ್ಲಿಯವರೆಗೆ ರಾಜ್ಯದಲ್ಲಿ ನೊಂದಾವಣಿಯಾದ ಸೌಹಾರ್ಧ ಸಹಕಾರ ಸಂಘಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ನೊಂದಾಯಿತ ಸೌಹಾರ್ಧ ಸಹಕಾರ ಸಂಘಗಳು ನಷ್ಟದಲ್ಲಿವೆಯೇ; ಇದ್ದಲ್ಲಿ ಅವುಗಳ ಪುನರ್ಶ್ಚೇತನಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸೌಹಾರ್ದ ಸಹಕಾರ ಸಂಘಗಳಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಾರ್ಡ್‌ಗಳಲ್ಲಿನ ಕಸ ಸಂಗ್ರಹಣೆ ವಾಹನಗಳು ಸಂಗ್ರಹಿಸದೆ ಇರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೦೭೭ (೨೪೪೧) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮನೆ ಮನೆಯ ಕಸ ಸಂಗ್ರಹಣೆ ಮಾಡುವ ವಾಹನಗಳೆಷ್ಟು; (ಸಂಪೂರ್ಣ ಸಂಸ್ಥೆಗಳವಾರು ಮಾಹಿತಿ ನೀಡುವುದು)

(ಆ) ಈ ನಗರ ಸಂಸ್ಥೆಗಳಲ್ಲಿ ಹೊಸದಾಗಿ ಖರೀದಿಸಲಾದ ವಾಹನಗಳ ಸಂಖ್ಯೆ ಎಷ್ಟು; ಅವುಗಳಿಗೆ ತಗುಲಿದ ವೆಚ್ಚ ಎಷ್ಟು; ಯಾವ್ಯಾವ ಕಂಪನಿಗಳಿಂದ ವಾಹನಗಳನ್ನು ಖರೀದಿಸಲಾಗಿದೆ; (ವಿವರ ನೀಡುವುದು)

(ಇ) ಈ ವಾಹನಗಳು ಪ್ರತಿದಿನ ಪ್ರತಿಯೊಂದು ವಾರ್ಡ್‌ಗಳಲ್ಲಿ ಮನೆ ಮನೆಗೆ ತೆರಳಿ ಕಸ ಸಂಗ್ರಹಣೆಗಾಗಿ ಸಂಚರಿಸುತ್ತಿವೆಯೇ; ಈ ಬಗ್ಗೆ ಸಾರ್ವಜನಿಕರಿಂದ ಜನ ಪ್ರತಿನಿಧಿಗಳಿಂದ ಸಾಕಷ್ಟು ದೂರುಗಳು ಬರುತ್ತಿರುವುದು ನಿಜವೇ;

(ಈ) ಹಾಗಿದ್ದಲ್ಲಿ, ಸಾರ್ವಜನಿಕರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲು ಅಧಿಕಾರಿಗಳಿಗೆ ಯಾವ ರೀತಿಯ ಆದೇಶ ನೀಡಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವ ಬಗ್ಗೆ

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೭೮ (೨೪೧೧) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಯಾವುದೇ ಸ್ಥಳೀಯ ಸಂಸ್ಥೆಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯದ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ಘನತ್ಯಾಜ್ಯ ಸಂಗ್ರಹವಾಗುತ್ತಿದೆ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್ ಬಳಕೆ ಮಾಡಲು ಮತ್ತು ವಿಲೇವಾರಿ ಮಾಡಲು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆ ಮಾಡಲು ವಾಹನಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತ್ಯಾಜ್ಯ ಸಂಗ್ರಹಣೆಗಾಗಿ ಎಷ್ಟು ವಾಹನಗಳನ್ನು ಖರೀದಿಸಲಾಗಿದೆ; ಅವು ಯಾವ ನಗರ ಮತ್ತು ಪಟ್ಟಣಗಳಲ್ಲಿ ಕಾರ್ಯನಿರತವಾಗಿವೆ ? (ವಿವರ ನೀಡವುದು)

## ರಾಜ್ಯದಲ್ಲಿ ಜಾರಿಯಲ್ಲಿರುವ ಅಮೃತ್ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೭೯ (೨೪೧೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಮೃತ್ ಯೋಜನೆ ಜಾರಿಗೊಳಿಸುತ್ತಿರುವ ನಗರ ಪ್ರದೇಶಗಳಲ್ಲಿ ಕಾಮಗಾರಿಗಳು ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಅಮೃತ್ ಯೋಜನೆಯಡಿ ಅಭಿವೃದ್ಧಿ ಪಡಿಸುವ ರಾಜ್ಯದ ನಗರಗಳು ಯಾವುವು; ಇಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು; ಇದಕ್ಕಾಗಿ ಬಿಡುಗಡೆಯಾಗಿರುವ ಅನುದಾನವೆಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಆಹಾರ ಸುರಕ್ಷತೆ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೮೦ (೨೪೧೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಆಹಾರ ಸುರಕ್ಷತೆಯನ್ನು ಪಾಲಿಸದ ಹೋಟೆಲ್‌ಗಳ ಮತ್ತು ಆಹಾರ ಕೈಗಾರಿಕೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ವಿವರ ನೀಡುವುದು)

(ಇ) ಆಹಾರ ಸುರಕ್ಷತೆಗೆ ಅನುಮತಿ ನೀಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ? (ವಿವರ ನೀಡುವುದು)

## ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಿಸಿರುವ ನಿವೇಶನಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೮೧ (೨೪೩೨ ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಕೈಗಾರಿಕಾ ನಿವೇಶನಗಳನ್ನು ಇದುವರೆಗೆ ಎಲ್ಲೆಲ್ಲಿ ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಅಧಿಕಾರಿಗಳ ಹಾಗೂ ನೌಕರರುಗಳ ಸಂಖ್ಯೆ ಎಷ್ಟು ;

(ಇ) ಖಾಲಿ ಇರುವ ನೌಕರರ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಪಡಿತರ ಧಾನ್ಯಗಳ ವಿತರಣೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೦೮೨ (೨೪೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ತಿಂಗಳು ತಲಾ ಒಬ್ಬರಿಗೆ ಬಿ.ಪಿ.ಎಲ್., ಮತ್ತು ಅಂತ್ಯೋದಯ ಕಾರ್ಡ್‌ದಾರರಿಗೆ ನೀಡಲಾಗುತ್ತಿರುವ ಪಡಿತರ ಧಾನ್ಯಗಳೆಷ್ಟು ; (ವಿವರ ಒದಗಿಸುವುದು)

(ಆ) ಪ್ರಸ್ತುತ, ಸದರಿ ಪಡಿತರ ವಿತರಣೆಯನ್ನು ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದಲ್ಲಿ, ಈ ರೀತಿ ಕಡಿಮೆಗೊಳಿಸಲು ಕಾರಣಗಳೇನು ;

(ಈ) ಆನ್‌ಲೈನ್ ಪಡಿತರ ವಿತರಣೆ ಸಮರ್ಪಕವಾಗಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸಮರ್ಪಕವಾಗಿ ವಿತರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

**Real Estate Regulatory Authority (RERA)**
**ಕಾರ್ಯನಿರ್ವಹಣೆಯ ಬಗ್ಗೆ**

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೨೦೮೪ (೨೪೩೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ಥಾಪಿತವಾಗಿರುವ Real Estate Regulatory Authority (RERA) ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ (RERA) ಕಾರ್ಯನಿರ್ವಹಿಸಿರುವ ವಿವರಗಳನ್ನು ನೀಡುವುದು ;

(ಇ) ಪ್ರಸಕ್ತದಲ್ಲಿ (RERA) ಸಂಸ್ಥೆಗೆ ಕಾಯ್ದೆ ನಿಯಮಗಳ ಅಡಿಯಲ್ಲಿ ಲಭ್ಯವಿರುವ ಅಧಿಕಾರಿಗಳು ಸಮರ್ಪಕವಾಗಿಲ್ಲದಿರುವುದರಿಂದ ಇತರೆ ಸ್ವತಂತ್ರ ಸಂಸ್ಥೆಗಳಾದ ಗ್ರಾಹಕ ಸಮಸ್ಯೆ ಪರಿಹಾರ ವೇದಿಕೆ ಮತ್ತು ಇತರೆ ಆಯೋಗಗಳಂತೆ ಅಧಿಕಾರ ನೀಡಲಾದ ಕಾಯ್ದೆಗೆ ತಿದ್ದುಪಡಿ ಪ್ರಸ್ತಾವನೆಯನ್ನು ಕಳುಹಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಕೈಗೊಂಡ ಕ್ರಮಗಳೇನು ?

## ಕಲ್ಲು ಗಣಿಗಾರಿಕೆಯಲ್ಲಿ ಸ್ಫೋಟಕ ವಸ್ತುಗಳಿಂದ ಸಂಭವಿಸಿದ ಸಾವು–ನೋವುಗಳ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೨೦೮೫ (೨೪೩೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ನಡೆದ ಗಣಿಗಾರಿಕೆ ಮತ್ತು ಕಲ್ಲುಗಾಣಿಕೆಯಲ್ಲಿ ಅಕ್ರಮವಾಗಿ ಬಳಸುತ್ತಿರುವ ಸ್ಫೋಟಕ ವಸ್ತುಗಳಿಂದ ಹಲವಾರು ಸಾವು–ನೋವು ಸಂಭವಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ;

(ಇ) ಈ ಗಣಿಗಾರಿಕೆ ಮತ್ತು ಕಲ್ಲುಗಾಣಿಕೆಯನ್ನು ಅಕ್ರಮವಾಗಿ ನಡೆಸುವುದಲ್ಲದೇ, ವೈಜ್ಞಾನಿಕವಾಗಿ ಮತ್ತು ಸುರಕ್ಷಿತವಾಗಿ ಸ್ಫೋಟಕಗಳನ್ನು ಬಳಸದೇ, ಅನುಭವ–ನುರಿತ–ಅರಿತ ಫೋರ್‌ಮನ್‌ಗಳ ಮತ್ತು ಗಣಿಗಾರರು ಇಲ್ಲದ ಕಾರಣಕ್ಕಾಗಿ ಇಂತಹ ಅಪಘಾತಗಳಿಗೆ ಕಾರಣ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಗಣಿಗಾರಿಕೆ ಮತ್ತು ಕಲ್ಲುಗಾಣಿಕೆ ಹಾಗೂ ಇವುಗಳಿಗೆ ಸಂಬಂಧಿಸಿದ ಚಟುವಟಿಕೆಗಳನ್ನು ವೈಜ್ಞಾನಿಕ ಮತ್ತು ಸುರಕ್ಷಿತ ರೀತಿಯಾಗಿ ನಡೆಸಲು ಈ ವಲಯದಲ್ಲಿ ಕಾರ್ಯಮಗ್ನರಾಗಿರುವ ಎಲ್ಲರಿಗೂ ಸೇರಿದಂತೆ ರಾಜ್ಯದಲ್ಲಿ ಒಂದು Mining school ನ್ನು ಕೇಂದ್ರ ಸರ್ಕಾರದ ಗಣಿ ಮಂತ್ರಾಲಯದ ಆಶ್ರಯದೊಂದಿಗೆ ಸ್ಥಾಪಿಸಲು ಉದ್ದೇಶಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

# ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳು ನೀಡಬೇಕಾಗಿರುವ ಬಾಕಿ ಮೊಬಲಗು ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :-**

೨೦೮೬ (೨೪೩೬) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸಹಕಾರ ಮತ್ತು ಖಾಸಗಿ ವಲಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ಪ್ರತಿ ವರ್ಷ ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ೩ ವರ್ಷಗಳ ವಿವರ ನೀಡುವುದು;

(ಆ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಸಕ್ಕರೆ ನೀತಿಯನ್ನು ಬದಲಾಯಿಸಲು ಈ ಸಕ್ಕರೆ ಕಾರ್ಖಾನೆಗಳು ಒತ್ತಾಯಿಸಿವೆಯೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ದಿನಾಂಕ : ೩೧-೧೨-೨೦೨೦ರ ಅಂತ್ಯಕ್ಕೆ ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳು ನೀಡಬೇಕಾಗಿರುವ ಕಬ್ಬು ಸರಬರಾಜಿನ ಬಾಕಿ ಮೊಬಲಗು ಎಷ್ಟು ; ಈ ಬಾಕಿಯನ್ನು ತಿರುವಳಿ ಮಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡಿರುವ ಆರ್ಥಿಕ ನೆರವು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೇಂದ್ರ ಸರ್ಕಾರದ ೨೦೨೦-೨೧ ನೇ ಆರ್ಥಿಕ ನೀತಿಯಲ್ಲಿ ಸಕ್ಕರೆ ವಲಯಕ್ಕೆ ಘೋಷಿತವಾಗಿರುವ ರೂ.೩೫,೦೦೦ ಕೋಟಿಗಳಲ್ಲಿ ರಾಜ್ಯ ಸರ್ಕಾರ ಪಡೆದ ಆರ್ಥಿಕ ನೆರವೆಷ್ಟು ? (ವಿವರ ನೀಡುವುದು)

## ಅಗತ್ಯ ವಸ್ತುಗಳ (ತಿದ್ದುಪಡಿ) ಕಾಯ್ದೆ–೨೦೨೦ರ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೨೦೮೭ (೨೪೩೭) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಗತ್ಯ ವಸ್ತುಗಳ (ತಿದ್ದುಪಡಿ) ಕಾಯ್ದೆ–೨೦೨೦ ರಂತೆ ಎಣ್ಣೆ ಕಾಳು, ದ್ವಿದಳ ಧಾನ್ಯ, ಈರುಳ್ಳಿ, ಆಲೂಗಡ್ಡೆ, ಅಡುಗೆ ಎಣ್ಣೆ ಮುಂತಾದವುಗಳನ್ನು ಅಗತ್ಯ ಸಾಮಗ್ರಿಗಳ ಪಟ್ಟಿಯಿಂದ ಹೊರತಂದ ನಂತರ ಮತ್ತು ಈ ಸಾಮಗ್ರಿಗಳ ಮೇಲೆ ವಿಧಿಸಿದ ದಾಸ್ತಾನು ಮಿತಿಯನ್ನು ತೆಗೆದ ನಂತರ ಬ್ಲ್ಯಾಕ್ ಮಾರ್ಕೆಟ್‌ನಲ್ಲಿ ಪದಾರ್ಥಗಳನ್ನು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ಪದಾರ್ಥಗಳು ಮುಕ್ತ ಮಾರುಕಟ್ಟೆಗೆ ವ್ಯಾಪಾರಿಗಳು ತಂದು ಹೆಚ್ಚಿನ ದರದಲ್ಲಿ ಮಾರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಕಪ್ಪು ಮಾರುಕಟ್ಟೆಯನ್ನು ತೊಡೆದುಹಾಕಲು ರಾಜ್ಯ ಸರ್ಕಾರ ಯಾವ ಕಾಯ್ದೆ ಮತ್ತು ನಿಯಮದ ಅಡಿ ಕ್ರಮ ಜರುಗಿಸಿದೆ ? (ವಿವರ ನೀಡುವುದು)

## ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೮೮ (೨೪೪೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರದಲ್ಲಿ ಒಳಚರಂಡಿ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಕಾರ್ಯಕ್ಕೆ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ; (ಸ್ಪಷ್ಟ ಮಾಹಿತಿ ನೀಡುವುದು)

(ಆ) ಒಳಚರಂಡಿ ನಿರ್ಮಾಣ ಹಂತ ೧ರ ಕಾಮಗಾರಿ ಯಾವ ಹಂತದಲ್ಲಿದೆ ; ಹಾಗೂ ಪೂರ್ಣಗೊಂಡಿದ್ದ ಕಡೆಗಳಲ್ಲಿ ಸಾರ್ವಜನಿಕರಿಗೆ ಸರಿಯಾಗಿ ಉಪಯೋಗವಾಗದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಯೋಜನೆ ವಿಫಲವಾಗಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಅಮೃತ್ ಯೋಜನೆ ಅಡಿಯಲ್ಲಿ ೩ರ ಹಂತಗಳಲ್ಲಿನ ಕಾಮಗಾರಿಗಳ ಪೈಕಿ ಕೈಗೆತ್ತಿಕೊಂಡ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಕಾಮಗಾರಿ ಪೂರ್ಣಗೊಂಡಿದ್ದಲ್ಲಿ ಇದಕ್ಕೆ ತಗುಲಿರುವ ವೆಚ್ಚ ಎಷ್ಟು ; ಈ ಕಾಮಗಾರಿಗಳ ನಿರ್ವಹಣೆ ಸರಿಯಾದ ರೀತಿಯಲ್ಲಿ ಆಗದಿರುವುದಕ್ಕೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ನಗರಕ್ಕೆ ಸಮರ್ಪಕವಾಗಿ ಕುಡಿಯುವ ನೀರನ್ನು ಪೂರೈಕೆ ಮಾಡಲು ಎಷ್ಟು ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಖರ್ಚಾದ ವೆಚ್ಚ ಎಷ್ಟು ; ಕಾಮಗಾರಿಗಳು ಯಾವ ಹಂತದಲ್ಲಿದೆ ; (ಕಾಮಗಾರಿವಾರು ಮಾಹಿತಿ ನೀಡುವುದು)

(ಉ) ಈ ಯೋಜನೆ ಅಡಿಯಲ್ಲಿ ಪ್ರತಿದಿನ ಕುಡಿಯುವ ನೀರು ಲಭ್ಯವಾಗದೆ ಇರಲು ಕಾರಣಗಳೇನು ; ಪ್ರತಿ ದಿನ ಕುಡಿಯುವ ನೀರು ಪೂರೈಕೆ ಮಾಡಲು ಕೈಗೊಂಡಿರುವ ಶಾಶ್ವತ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಮಹಿಳಾ ಉದ್ಯಮಿಗಳಿಗೆ ಸವಲತ್ತುಗಳ ಕುರಿತು .

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೦೮೯ (೨೪೪೯) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಇಚ್ಛಿಸುವ ಮಹಿಳಾ ಉದ್ಯಮಿಗಳಿಗೆ ಸರ್ಕಾರದಿಂದ ದೊರೆಯುವ ಸಾಲ ಸೌಲಭ್ಯ, ಸಹಾಯಧನ, ಪ್ರೋತ್ಸಾಹಧನ ಹಾಗೂ ವಿಶೇಷ ಸವಲತ್ತುಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಸಣ್ಣ ಕೈಗಾರಿಕೆಗಳು ಯಾವುವು ; (ವಿವರ ನೀಡುವುದು)

(ಇ) ೨೦೨೦–೨೧ನೇ ಸಾಲಿನಲ್ಲಿ ಈ ರೀತಿಯ ಕೈಗಾರಿಕೆಗಳನ್ನು ಎಷ್ಟು ಪ್ರಾರಂಭಿಸಲಾಗಿದೆ ; (ವಿವರ ನೀಡುವುದು)

(ಈ) ಕೃಷಿ ವಲಯಕ್ಕೆ ಸಂಬಂಧಿಸಿದಂತೆ ಇರುವ ಸಣ್ಣ ಕೈಗಾರಿಕೆಗಳು ಯಾವುವು ; ಅವುಗಳನ್ನು ಪ್ರಾರಂಭಿಸಲು ಇಚ್ಛಿಸುವವರಿಗೆ ದೊರೆಯುವ ಸೌಲಭ್ಯಗಳೇನು ?

## ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಚುನಾವಣೆ ನಡೆಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೦ (೨೪೩೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು ತಾಲ್ಲೂಕು, ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾಯಿತ ಸದಸ್ಯರ ಅವಧಿ ಯಾವಾಗ ಮುಕ್ತಾಯವಾಗಿದೆ ; ಮುಕ್ತಾಯಗೊಂಡಿದ್ದರೂ ಈವರೆಗೆ ಚುನಾವಣೆ ನಡೆಸದಿರಲು ಕಾರಣಗಳೇನು ;

(ಆ) ಚುನಾವಣೆ ನಡೆಸಲು ಅಗತ್ಯ ಮತದಾರರ ಪಟ್ಟಿಯನ್ನು ಪರಿಷ್ಕರಣೆ ಮಾಡಲಾಗಿದೆಯೇ ; (ಪರಿಷ್ಕರಣೆ ಮಾಡಿದ್ದಲ್ಲಿ ವಿವರ ನೀಡುವುದು)

(ಇ) ಸಂಘದ ಚುನಾಯಿತ ಸದಸ್ಯರ ಅವಧಿ ಮುಕ್ತಾಯಗೊಂಡಿರುವ ಹಿನ್ನಲೆಯಲ್ಲಿ ಹೊಸ ಸಾಲ ಮಂಜೂರಾತಿ ಮಾಡಲು ಸಾಧ್ಯವಾಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಸಮಯದೊಳಗಾಗಿ ಚುನಾವಣೆ ನಡೆಸಲಾಗುವುದು ?

## ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನಲ್ಲಿ ಸಾಫ್ಟ್‌ವೇರ್ ಖರೀದಿಸಿರುವ ಬಗ್ಗೆ

**ಶ್ರೀ ಬಿ.ಎಂ. ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೯೧ (೨೪೨೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಕೇಂದ್ರ ಕಛೇರಿ ಸೇರಿದಂತೆ ವಿವಿಧ ಶಾಖೆಗಳ ಕಛೇರಿಗಳಲ್ಲಿರುವ ಕಂಪ್ಯೂಟರ್‌ಗಳಿಗೆ ಉಪಯೋಗಿಸುತ್ತಿರುವ ಸಾಫ್ಟ್‌ವೇರ್ ಯಾವುದು ; ಸದರಿ ಸಾಫ್ಟ್‌ವೇರ್‌ನ್ನು ಯಾರಿಂದ ಯಾವ ದಿನಾಂಕದಂದು ಖರೀದಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಇತ್ತೀಚೆಗೆ ಸದರಿ ಬ್ಯಾಂಕಿನ ಕೇಂದ್ರ ಕಛೇರಿಯ ಕಂಪ್ಯೂಟರ್‌ಗಳಿಗೆ ಸಾಫ್ಟ್‌ವೇರ್ ತಯಾರಿಸಲು ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್‌ರವರಿಗೆ ಸುಮಾರು ೨೮ ಲಕ್ಷ ರೂಪಾಯಿ ಮೊತ್ತವನ್ನು ಯಾವುದೇ ಎಂಓಯು ಮಾಡಿಕೊಳ್ಳದೆ ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹಿಂದೆ ಮ್ಯಾನ್ ಪವರ್ ಇಲ್ಲವೆಂದು ಸಾಫ್ಟ್‌ವೇರ್ ಮಾಡಲು ನಿರಾಕರಿಸಿದ ನ್ಯಾಷನಲ್ ಇನ್‌ಫಾರ್ಮೆಟಿಕ್ ಸೆಂಟರ್‌ರವರಿಗೆ ಅಕ್ರಮವಾಗಿ ೨೮ ಲಕ್ಷ ರೂಪಾಯಿಗಳನ್ನು ಪಾವತಿಸಿರುವ ಅಧಿಕಾರಿ ಯಾರು ; ಯಾವ ದಿನಾಂಕದಂದು ಸದರಿ ಮೊತ್ತವನ್ನು ಪಾವತಿಸಲಾಗಿರುತ್ತದೆ ; (ಮಾಹಿತಿ ಒದಗಿಸುವುದು)

(ಇ) ಸದರಿ ಮೊತ್ತವನ್ನು ವಸೂಲಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಮೊತ್ತ ವಸೂಲಿ ಮಾಡಲಾಗಿದೆ ; ವಸೂಲಾಗದ ಮೊತ್ತವನ್ನು ಯಾರಿಂದ ಯಾವಾಗ ವಸೂಲಿ ಮಾಡಲಾಗುವುದು ; ಹಾಗೂ ಈ ಅಕ್ರಮಕ್ಕೆ ಕಾರಣರಾದ ಅಧಿಕಾರಿ ಮೇಲೆ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು)

## ಕೃಷಿ ಮಾರಾಟ ಇಲಾಖೆಯ ಅವರ್ತ ನಿಧಿ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯೨ (೨೪೨೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖರೀದಿ ಏಜೆನ್ಸಿಗಳು (Procurement Agencies) ಎಂದರೇನು ; ಅವು ಯಾವುವು, ಕೃಷಿ ಮಾರಾಟ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಏಜೆನ್ಸಿಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಏಜೆನ್ಸಿಗಳು ಕೃಷಿ ಮಾರಾಟ ಇಲಾಖೆಯ ಅವರ್ತ ನಿಧಿ ಹಾಗೂ ಇತರೆ ನಿಧಿಗಳಿಂದ ಹಣ ಪಡೆಯಲು ಇರುವ ಮಾನದಂಡನೆಗಳೇನು ; ಹಾಗೂ ಇರುವ ಮಾರ್ಗದರ್ಶಿ ಸೂತ್ರಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಕಾರವಾರ ಜಿಲ್ಲೆಯಲ್ಲಿ ವಿವಿಧ ತಾಲ್ಲೂಕುಗಳಲ್ಲಿ ಕೃಷಿ ಮಾರಾಟ ಇಲಾಖೆಯಿಂದ ಎಷ್ಟು ವರ್ಷಗಳಿಂದ ಈ ಏಜೆನ್ಸಿಗಳು ಅವರ್ತ ನಿಧಿ ಹಾಗೂ ಇತರೆ ನಿಧಿಗಳಿಂದ ಪಡೆದಿರುವ ಹಣವೆಷ್ಟು ; ಹಾಲಿ ಬಾಕಿ ಇರುವ ಹಣವೆಷ್ಟು ಹಾಗೂ ಯಾವ ಉದ್ದೇಶಕ್ಕಾಗಿ ಹಣ ಪಡೆಯಲಾಗಿತ್ತು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ೨೦೧೯-೨೦ ಮತ್ತು ೨೦೨೦-೨೧ರಲ್ಲಿ ಮಾರುಕಟ್ಟೆ ಸುಧಾರಣಾ ನಿಧಿಯಿಂದ ಕೃಷಿ ಉತ್ಪನ್ನಗಳ ಅಸೇಸಿಂಗ್ ಕಾರ್ಯಗಳಿಗಾಗಿ ಯಾವ ಕಾರ್ಯಕ್ರಮಗಳಿಗಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ? (ವಿವರವಾಗಿ ಏಜೆನ್ಸಿವಾರು, ಕಾರ್ಯಕ್ರಮವಾರು ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು)

## ಕುಡಿಯುವ ನೀರಿನ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೦೯೩ (೨೪೨೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರವಾರ ಜಿಲ್ಲೆಯ ಹಳಿಯಾಳ ದಾಂಡೇಲಿ ಪುರಸಭೆ/ನಗರ ಸಭೆ ವ್ಯಾಪ್ತಿಯ ಎಲ್ಲಾ ವಾರ್ಡ್‌ಗಳಲ್ಲಿ ದಿನದ ೨೪ ಗಂಟೆ ಕುಡಿಯುವ ನೀರು ಪೂರೈಕೆ ಯೋಜನೆ ಆರಂಭವಾಗಿದೆಯೇ ;

(ಆ) ಈ ಯೋಜನೆಗಾಗಿ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಿದೆ, ಇನ್ನೂ ಎಷ್ಟು ಕಾಮಗಾರಿ ಬಾಕಿ ಇದೆ, ಕಾಮಗಾರಿ ಯಾವ ಏಜೆನ್ಸಿಗೆ ನೀಡಲಾಗಿದೆ ;

(ಇ) ಯೋಜನೆ ಕಾಮಗಾರಿ ಕಳಪೆಯಾಗಿರುವುದರಿಂದ ಅನೇಕ ಕಡೆ ಪೈಪುಗಳು ಒಡೆದು ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಯಾರು ಹೊಣೆ ; ಈ ರೀತಿ ಕಳಪೆ ಕಾಮಗಾರಿ ಮಾಡಿರುವ ಗುತ್ತಿಗೆದಾರರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸೂಕ್ತ ವಿವರ ನೀಡುವುದು)

## ಹೋಟೆಲ್ ಹಾಗೂ ಉಪಹಾರ ಮಂದಿರ (ಕ್ಯಾಂಟೀನ್) ಗಳ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೦೯೪ (೨೪೬೧) ಮಾನ್ಯ  ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ನೋಂದಾಯಿತ ಹೋಟೆಲ್, ಕ್ಯಾಂಟೀನ್ (ಉಪಹಾರ ಮಂದಿರ) ಗಳ  ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿರುವ  ಹೋಟೆಲ್ ಮಾಲೀಕರ ಸಂಘಗಳ ಬಗ್ಗೆ ಮಾಹಿತಿಯನ್ನು ನೀಡುವುದು ;

(ಇ) ನಗರ ಪ್ರದೇಶಗಳಲ್ಲಿ ಹೋಟೆಲ್ ಹಾಗೂ ಕ್ಯಾಂಟೀನ್ (ಉಪಹಾರ ಮಂದಿರ) ತೆರೆಯುವ ಬಗ್ಗೆ ಹಾಗೂ ಹೋಟೆಲ್ ಕ್ಯಾಂಟೀನ್‌ಗಳ ಹೆಸರನ್ನು ನೋಂದಾಯಿಸುವ ಬಗ್ಗೆ ಇರುವ ನಿಯಮ ಹಾಗೂ ಮಾನದಂಡಗಳ ಬಗ್ಗೆ ಮಾಹಿತಿ ನೀಡುವುದು ;

(ಈ) ಪ್ರತಿ ತಿಂಗಳು ಹೋಟೆಲ್ ಹಾಗೂ ಕ್ಯಾಂಟೀನ್‌ಗಳಿಂದ ಸರ್ಕಾರಕ್ಕೆ ಸಂಗ್ರಹವಾಗುತ್ತಿರುವ ಆದಾಯವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಬೀದಿ ಬದಿ ಕ್ಯಾಂಟೀನ್‌ಗಳಿಗೆ ಉಪಹಾರ ಹಾಗೂ ಇತರೆ ತಿಂಡಿಗಳಿಗೆ ತೆರಿಗೆಯನ್ನು ವಿಧಿಸಲಾಗುತ್ತಿದೆಯೇ ; (ಮಾಹಿತಿಯನ್ನು ನೀಡುವುದು)

(ಊ) ತೆರಿಗೆ ವಿಧಿಸುತ್ತಿದ್ದಲ್ಲಿ, ತೆರಿಗೆ ದರ ಹಾಗೂ ಶುಲ್ಕದ ಪ್ರಮಾಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕರ್ನಾಟಕ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ ಬಂಡವಾಳ ಹಾಗೂ ಸಿಬ್ಬಂದಿಗಳ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೯೫ (೨೪೨೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಬಂಡವಾಳ ಎಷ್ಟು ; ಸದರಿ ಬ್ಯಾಂಕಿನ ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಎಷ್ಟೆಷ್ಟು ಮೊತ್ತವಿದೆ ; (ಲೆಕ್ಕ ಶೀರ್ಷಿಕೆವಾರು ಮಾಹಿತಿ ಒದಗಿಸುವುದು)

(ಆ) ಸದರಿ ಬ್ಯಾಂಕು ಹೊಂದಿರುವ ಸ್ವಂತ ಆಸ್ತಿ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಮೈಸೂರು ಶಾಖಾ ಕಛೇರಿಯ ಕಟ್ಟಡವನ್ನು ಲೋಕೋಪಯೋಗಿ ಇಲಾಖೆ ಹಾಗೂ ಮೈಸೂರು ಮಹಾನಗರ ಪಾಲಿಕೆಯ ಅನುಮತಿ

ಪಡೆಯದೇ ಕಾನೂನು ಬಾಹಿರವಾಗಿ ಒಡೆದು ಹಾಕಿ ನಿವೇಶನದ ಸಾಮಗ್ರಿಗಳನ್ನು ವಿಲೇವಾರಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ರೀತಿ ಕಾನೂನು ಬಾಹಿರವಾಗಿ ಕಛೇರಿ ಕಟ್ಟಡವನ್ನು ಒಡೆದು ಹಾಕಲು ತೀರ್ಮಾನಿಸಿದವರು ಯಾರು ; ಇವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯಾದ್ಯಾಂತ ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಶಾಖೆಗಳ ಸಂಖ್ಯೆ ಎಷ್ಟು ; ಕೇಂದ್ರ ಕಛೇರಿ ಹಾಗೂ ಶಾಖಾ ಕಛೇರಿಗಳು ಸೇರಿದಂತೆ ಸದರಿ ಬ್ಯಾಂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಇವರುಗಳಲ್ಲಿ ಎರವಲು ಸೇವೆಯು ಮೇಲೆ ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು ; (ಶಾಖಾವಾರು ಮಾಹಿತಿ ಒದಗಿಸುವುದು)

(ಉ) ಕೆಲವು ಶಾಖೆ ಕಛೇರಿಯುಲ್ಲಿ ಅಗತ್ಯಕ್ಕಿಂತ ಹೆಚ್ಚು ಸಿಬ್ಬಂದಿಗಳಿರುವುದು ಹಾಗೂ ಕೆಲವು ಶಾಖಾ ಕಛೇರಿಗಳಲ್ಲಿ ಸಿಬ್ಬಂದಿಗಳ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ, ಈ ಸಂಬಂಧ ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಊ) ಯಾವ ಯಾವ ವಿಷಯಗಳ ಮೇಲೆ ಎಷ್ಟು ಅಧಿಕಾರಿ/ನೌಕರರುಗಳ ವಿರುದ್ಧ ವಿಚಾರಣೆ ನಡೆಸಲಾಗುತ್ತಿದೆ ; ವಿಚಾರಣೆಗಳು ಯಾವ ಹಂತದಲ್ಲಿದೆ ; ದೋಷಾರೋಪಣೆ ಹೊರಡಿಸಿರುವ/ದೋಷಿತ ಅಧಿಕಾರಿ/ನೌಕರರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಶಾಖಾವಾರು ಮಾಹಿತಿ ಒದಗಿಸುವುದು)

(ಋ) ಕೇಂದ್ರ ಕಛೇರಿ ಸೇರಿದಂತೆ ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ವಿವಿಧ ಶಾಖೆಗಳಿಗೆ ಮಂಜೂರಾದ ಹುದ್ದೆಗಳಲ್ಲಿ ಭರ್ತಿ ಮಾಡಿಕೊಳ್ಳದಿರುವ ಹುದ್ದೆಗಳ ಸಂಖ್ಯೆ ಎಷ್ಟು; ಭರ್ತಿ ಮಾಡಿಕೊಳ್ಳದಿರಲು ಕಾರಣವೇನು; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುವುದು?

## ಕೆ.ಐ.ಎ.ಡಿ.ಬಿ ಮೂಲಕ ಜಮೀನು ಸ್ವಾಧೀನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೯೬ (೨೪೨೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಕೆ.ಐ.ಎ.ಡಿ.ಬಿ ಮೂಲಕ ಎಷ್ಟು ಎಕರೆ ಭೂಮಿಯನ್ನು ಕೈಗಾರಿಕೆಗಳಿಗಾಗಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಕೈಗಾರಿಕೆಗಳಿಗಾಗಿ ವಶಪಡಿಸಿಕೊಳ್ಳಲಾದ ಭೂಮಿಯಿಂದ ಎಷ್ಟು ಎಕರೆ ಭೂಮಿಯನ್ನು ಭೂಮಿಯ ಮಾಲೀಕರಿಗೆ ಹಿಂತಿರುಗಿಸಲಾಗಿದೆ ; ಯಾವ ಕಾರಣಕ್ಕೆ ಹಿಂತಿರುಗಿಸಲಾಗಿದೆ ; (ಜಿಲ್ಲಾವಾರು ವಿವರದೊಂದಿಗೆ ಮಾಹಿತಿ ನೀಡುವುದು)

(ಇ) ಕೆ.ಐ.ಎ.ಡಿ.ಬಿ ಮೂಲಕ ಸ್ವಾಧೀನಪಡಿಸಿಕೊಳ್ಳಲಾದ ಭೂಮಿಗೆ ಪರ್ಯಾಯವಾಗಿ ಭೂ ಮಾಲೀಕರಿಗೆ ಯಾವ ರೀತಿಯ ಪರಿಹಾರ ವಿತರಿಸಲಾಗುತ್ತದೆ ; ಕಳೆದ ಐದು ವರ್ಷಗಳಿಂದ ಭೂ ಮಾಲೀಕರಿಗೆ ಪರಿಹಾರ ಒದಗಿಸದಿರುವ ಎಷ್ಟು ಪ್ರಕರಣಗಳು ಬಾಕಿ ಇವೆ ? (ಜಿಲ್ಲಾವಾರು ಮಾಹಿತಿ ನೀಡುವುದು)

# ಮೈಸೂರಿನಲ್ಲಿ ಚಿತ್ರನಗರಿಯನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೯೭ (೨೪೩೯) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ಇಮ್ಮಾವು (ಹಿಮ್ಮಾವು) ಬಳಿ ಚಿತ್ರನಗರಿಯನ್ನು (ಫಿಲ್ಮ್ ಸಿಟಿ) ಸ್ಥಾಪಿಸುವ ಯೋಜನೆಯನ್ನು ಪುನರುಜ್ಜೀವನಗೊಳಿಸಿ, ಇಲ್ಲಿಯೇ ಚಿತ್ರನಗರಿಯನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ ; ಗದ್ದಲಗೌಜುಗಳಿಲ್ಲದ ಈ ಸ್ಥಳವು ಚಿತ್ರನಗರಿಯ ಸ್ಥಾಪನೆಗೆ ಸೂಕ್ತವಾಗಿದೆಯೆಂಬುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಮೈಸೂರು ಜಿಲ್ಲೆಯ ಹಿಮ್ಮಾವಿನಲ್ಲಿ ಈಗಾಗಲೇ ಚಿತ್ರನಗರಿಗಾಗಿ ಸ್ವಾಧೀನಪಡಿಸಿಕೊಂಡಿದ್ದ ಭೂಮಿಯ ವಿಸ್ತೀರ್ಣ ಎಷ್ಟು ; ಪ್ರಸ್ತುತ ಸದರಿ ಭೂಮಿಯು ಯಾರ ವಶದಲ್ಲಿದೆ ;

(ಇ) ಮೈಸೂರು, ಚಾಮರಾಜನಗರ, ಹಾಸನ, ಮಂಡ್ಯ ಜಿಲ್ಲೆಗಳಲ್ಲಿ ಸುಮಾರು ೨೦೦ಕ್ಕೂ ಹೆಚ್ಚು ಪ್ರವಾಸೋದ್ಯಮ ಪ್ರಕೃತಿಸೌಂದರ್ಯ ತಾಣಗಳಿದ್ದು, ಮೈಸೂರು ಜಿಲ್ಲೆಯಲ್ಲಿ ಚಿತ್ರನಗರಿ ಸ್ಥಾಪನೆಯಿಂದ ಚಿತ್ರೀಕರಣಕ್ಕೆ ಅನುಕೂಲವಾಗುವುದರ ಜೊತೆಗೆ ಪ್ರವಾಸೋದ್ಯಮಕ್ಕೆ ಕೂಡಾ ಕಾಯಕಲ್ಪ ನೀಡಿದಂತಾಗುವುದಿಲ್ಲವೇ?

30

## ಚಾಮರಾಜನಗರಕ್ಕೆ ಕುಡಿಯುವ ನೀರಿನ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯೮ (೨೪೪೦) ಮಾನ್ಯ ನಗರಾಭಿವೃದ್ದಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರಕ್ಕೆ ಪ್ರತಿದಿನ ಅಗತ್ಯವಾಗಿರುವ ಕುಡಿಯುವ ನೀರಿನ ಪ್ರಮಾಣ ಎಷ್ಟು ; ಪ್ರಸ್ತುತ ಎಷ್ಟು ಪ್ರಮಾಣದ ನೀರನ್ನು ನದಿಮೂಲದಿಂದ ಸರಬರಾಜು ಮಾಡಲಾಗುತ್ತಿದೆ ; ನಗರದ ಜನತೆ ಕುಡಿಯುವ ನೀರಿನ ಕೊರತೆಯನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಾಮರಾಜನಗರಕ್ಕೆ ಮಾಲಿಂಗಿ ಬಳಿಯಿಂದ ಕಾವೇರಿ ನದಿಯ ನೀರನ್ನು ಪೈಪ್‌ಲೈನ್ ಮೂಲಕ ಸರಬರಾಜು ಮಾಡುವ ಎರಡನೇ ಹಂತದ ನೀರು ಸರಬರಾಜು ಯೋಜನೆಗೆ, ಡಿ.ಪಿ.ಆರ್. ಸಿದ್ಧವಾಗಿದೆಯೇ ; ಹಾಗೂ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ವಿವರ ನೀಡುವುದು)

(ಇ) ಎರಡನೇ ಹಂತದ ನೀರು ಸರಬರಾಜು ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪ್ರಾರಂಭ ಮಾಡಲಾಗುವುದು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0227/500 ಪ್ರತಿಗಳು/22–03–2021